ಕರ್ನಾಟಕ ಸರ್ಕಾರ

# ಜಿಲ್ಲಾ ಪಂಚಾಯತ್, ರಾಯಚೂರು

ಸಂ: ಜಿಪಂರಾ/ಗ್ರುಮೇನೇ/2023-24 ದಿನಾಂಕ:20.12.2023

## ಅಧಿಕೃತ ಜ್ಞಾಪನ

ವಿಷಯ: ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ನಕಲು ದಾಖಲಾತಿಗಳನ್ನು ಪರಿಶೀಲಿಸಿ ಪಟ್ಟಿಯನ್ನು ತಯಾರಿಸಿದ್ದು, ಪಟ್ಟಿಯಲ್ಲಿರುವ ಅಭ್ಯರ್ಥಿಗಳು ಮೂಲ ದಾಖಲಾತಿಗಳ ಪರಿಶೀಲನೆಗಾಗಿ ದಿನಾಂಕ: 05.01.2024 ರಂದು ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಪರಿಶೀಲನೆಗೆ ಹಾಜರಾಗುವ ಕುರಿತು.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ರಾಯಚೂರು ಜಿಲ್ಲಾ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ 22 ಗ್ರಾಮ ಪಂಚಾಯತ್ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಹುದ್ದೆಗಳ ನೇಮಕಾತಿಗೆ ಜಿಲ್ಲಾ ಪಂಚಾಯತಿಯಿಂದ ಆನ್‌ಲೈನ್ ಮುಖಾಂತರ ದಿನಾಂಕ: 18.10.2023 ರಿಂದ 10.11.2023 ರವರೆಗೆ ಆನ್‌ಲೈನ್ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ.

ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ನಕಲು ದಾಖಲಾತಿಗಳನ್ನು ಪರಿಶೀಲಿಸಲಾಗಿದೆ ಹಾಗೂ ಮೂಲ ದಾಖಲಾತಿಗಳನ್ನು ಪರಿಶೀಲಿಸಲು ಸರ್ಕಾರದ ನಿರ್ದೇಶನದಂತೆ ಈ ಕೆಳಕಂಡ ಮಾನದಂಡಗಳನ್ನು ಆಧರಿಸಿ, ಪಟ್ಟಿಯನ್ನು ಸಿದ್ದಪಡಿಸಲಾಗಿರುತ್ತದೆ.

- ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಆಯಾ ಗ್ರಾಮ ಪಂಚಾಯತಿಗಳಿಗೆ ನಿಗದಿಪಡಿಸುವ ಮೀಸಲಾತಿ ವರ್ಗಕ್ಕೆ ಸೇರಿದವರೇ ಉದಾ: ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-2ಎ ಇತ್ಯಾದಿ.
- ಸದರಿ ಅಭ್ಯರ್ಥಿಗಳು ಸಮತಲ ಮೀಸಲಾತಿಗೆ ಒಳಪಡುವರೇ ಉದಾ: ಮಹಿಳೆ, ಅಂಗವಿಕಲ, ಯೋಜನಾನಿರಾಶ್ರಿತ, ಕನ್ನಡ ಮಾಧ್ಯಮ, ಗ್ರಾಮೀಣ ಇತ್ಯಾದಿ.
- ಮೇಲ್ಕಂಡ ಅಂಶಗಳನ್ನು ಗಮನದಲ್ಲಿರಿಸಿ, **ಆಯಾ ಸಂಬಂಧಿಸಿದ ಗ್ರಾಮ ಪಂಚಾಯತಿಗೆ ಅರ್ಜಿ ಸಲ್ಲಿಸಿದವರಲ್ಲಿ "ಲೈಬ್ರರಿ ಸೈನ್ಸ್ ಆಗಿ ಕನಿಷ್ಟ 3 ತಿಂಗಳ ಕಂಪ್ಯೂಟರ್ ಕೋರ್ಸ್ ನಲ್ಲಿ ಉತ್ತೀರ್ಣರಾದ ಹಾಗೂ ಪಿ.ಯು.ಸಿ ಯಲ್ಲಿ ಜೇಷ್ಟತೆಯನ್ನು ಹೊಂದಿದ, ಸ್ಥಳೀಯ ಗ್ರಾಮ ಪಂಚಾಯತಿಯವರಿಗೆ ಮೊದಲ ಆದ್ಯತೆ ನೀಡಲಾಗಿರುತ್ತದೆ.** ಒಂದು ವೇಳೆ ಸದರಿಯವರು ಲಭ್ಯವಿಲ್ಲದಿದ್ದಲ್ಲಿ "ಲೈಬ್ರರಿ ಸೈನ್ಸ್ ಆಗಿ ಕನಿಷ್ಟ 3 ತಿಂಗಳ ಕಂಪ್ಯೂಟರ್ ಕೋರ್ಸ್ ನಲ್ಲಿ ಉತ್ತೀರ್ಣರಾದ ಹಾಗೂ ಪಿ.ಯು.ಸಿ ಯಲ್ಲಿ ಜೇಷ್ಟತೆಯನ್ನು ಹೊಂದಿದ, ಅದೇ ತಾಲೂಕಿನ ಬೇರೆ ಗ್ರಾಮ ಪಂಚಾಯತಿಯವರಿಗೆ ಆದ್ಯತೆ ನೀಡಲಾಗಿರುತ್ತದೆ. ಒಂದು ವೇಳೆ ಸದರಿಯವರೂ ಲಭ್ಯವಿಲ್ಲದಿದ್ದಲ್ಲಿ ಲೈಬ್ರರಿ ಸೈನ್ಸ್ ಆಗದೇ ಇರುವ ಕನಿಷ್ಟ 3 ತಿಂಗಳ ಕಂಪ್ಯೂಟರ್

ಕೋರ್ಸ್ ನಲ್ಲಿ ಉತ್ತೀರ್ಣರಾದ ಹಾಗೂ ಪಿ.ಯು.ಸಿ ಯಲ್ಲಿ ಜೇಷ್ಠತೆ ಹೊಂದಿರುವ "ಸ್ಥಳೀಯ ಗ್ರಾಮ ಪಂಚಾಯತಿಯವರಿಗೆ ಆದ್ಯತೆ ನೀಡಲಾಗಿರುತ್ತದೆ".

- ನೇರ ನೇಮಕಾತಿಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೆಹಿಮ 2023 ಬೆಂಗಳೂರು ದಿನಾಂಕ: 08.03.2023 ರಲ್ಲಿರುವಂತೆ ಈ ಕೆಳಕಂಡ A ಮತ್ತು B ಅಂಶಗಳ ವಿವರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಮಾತ್ರ ನೀಡಲಾಗಿರುತ್ತದೆ.

A. (ನೇರ ನೇಮಕಾತಿಯ ಸಂದರ್ಭದಲ್ಲಿ ಅಧಿಸೂಚಿಸಿದ ಅಂಗವೈಕಲ್ಯವುಳ್ಳ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅಂತಹ ರಿಕ್ತಸ್ಥಾನಗಳನ್ನು ಮುಂದಿನ ನೇಮಕಾತಿಗೆ ಮುಂದಕ್ಕೊಯ್ಯತಕ್ಕದ್ದು. ಮುಂದಿನ ನೇಮಕಾತಿಯಲ್ಲಿಯೂ, ಅಧಿಸೂಚಿತ ಅಂಗವೈಕಲ್ಯವನ್ನುಳ್ಳ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಆಯಾ ಪ್ರವರ್ಗದ ಇತರ ಅಂಗವೈಕಲ್ಯವುನ್ನುಳ್ಳ ಅಭ್ಯರ್ಥಿಗಳಿಂದ ಭರ್ತಿ ಮಾಡತಕ್ಕದ್ದು. ಒಂದು ವೇಳೆ ಯಾವುದೇ ಅಂಗವೈಕಲ್ಯವನ್ನುಳ್ಳ ಅಭ್ಯರ್ಥಿಗಳು ಲಭ್ಯರಾಗದಿದ್ದಲ್ಲಿ ಆಯಾ ಪ್ರವರ್ಗದ ಇತರೆ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡತಕ್ಕದ್ದು.

B. ನೇರ ನೇಮಕಾತಿಯ ಸಂದರ್ಭದಲ್ಲಿ ಉಳಿದ ಸಮತಳ ಮೀಸಲಾತಿಗಳಾದ ಮಾಜಿ ಸೈನಿಕರಿಗೆ, ಯೋಜನೆಗಳಿಂದ ನಿರ್ವಸಿತರಾದವರಿಗೆ, ಮಹಿಳೆಯರಿಗೆ, ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ತೃತೀಯ ಲಿಂಗಿಗಳಿಗೆ ಹಾಗೂ ಗ್ರಾಮೀಣ ಅಭ್ಯರ್ಥಿಗಳಿಗೆ ಗುರುತಿಸಿರುವ ಸ್ಥಾನಗಳನ್ನು ಆ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಂದ ಭರ್ತಿ ಮಾಡತಕ್ಕದ್ದು. ಒಂದು ವೇಳೆ, ಮಾಜಿ ಸೈನಿಕರಿಗೆ/ ಯೋಜನೆಗಳಿಂದ ನಿರ್ವಸಿತರಾದವರಿಗೆ/ ತೃತೀಯ ಲಿಂಗಿಗಳಿಗೆ ಸಂಬಂಧಿಸಿದ ಸಮತಳ ಮೀಸಲಾತಿ ವರ್ಗಕ್ಕೆ ಮೀಸಲಿರಿಸಿದ ರಿಕ್ತಸ್ಥಾನಗಳನ್ನು ಎದುರಾಗಿ ಆ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಆ ರಿಕ್ತಸ್ಥಾನಗಳನನು ಅದೇ ನೇರ ಮೀಸಲಾತಿಗೆ ಸೇರಿದ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡತಕ್ಕದ್ದು. ಮಹಿಳೆಯರಿಗೆ ಮೀಸಲಿರಿಸಿದ ರಿಕ್ತಸ್ಥಾನಳಿಗೆ ಎದುರಾಗಿ ಆ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಆ ರಿಕ್ತಸ್ಥಾನಗಳನ್ನು ಅದೇ ನೇರ ಮೀಸಲಾತಿಗೆ ಸೇರಿದ ಪುರುಷ ಅಭ್ಯರ್ಥಿಗಳಿಂದ ಭರ್ತಿ ಮಾಡತಕ್ಕದ್ದು. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮತ್ತು ಗ್ರಾಮೀಣ ಅಭ್ಯರ್ಥಿಗಳಿಗೆ ಗುರುತಿಸಿರುವ ಸ್ಥಾನಗಳನ್ನು ಆ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಂದಲೇ ಭರ್ತಿ ಮಾಡತಕ್ಕದ್ದು).

ಮುಂದುವರೆದು ಈ ಪಟ್ಟಿಯು "ತಾತ್ಕಾಲಿಕ ಪಟ್ಟಿಯಾಗಿರುವುದಿಲ್ಲ". ಪಟ್ಟಿಯಲ್ಲಿರುವ ಅಭ್ಯರ್ಥಿಗಳ ಮೂಲ ದಾಖಲೆಗಳನ್ನು ಪರಿಶೀಲಿಸಿದ ನಂತರ ಮತ್ತು ಶೈಕ್ಷಣಿಕ ಹಾಗೂ ಇತರೆ ದಾಖಲಾತಿಗಳ ನೈಜತೆ ಸ್ವೀಕೃತಿಗೊಂಡ ನಂತರ ತಾತ್ಕಾಲಿಕ ಪಟ್ಟಿಯನ್ನು ಹೊರಡಿಸಲಾಗುವುದು. ಈ

ರೀತಿ ಹೊರಡಿಸಿದ ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆಗಳಿಗಾಗಿ 15 ದಿನಗಳ ಕಾಲಾವಕಾಶವನ್ನು ನೀಡಲಾಗುವುದು. ಸದರಿ ಆಕ್ಷೇಪಣೆಗಳನ್ನು ಪರಿಶೀಲಿಸಿದ ನಂತರವೇ ಅಂತಿಮ ಪಟ್ಟಿಯನ್ನು ಹೊರಡಿಸಲಾಗುವುದು.

ಪ್ರಯುಕ್ತ ಪಟ್ಟಿಯಲ್ಲಿರುವಂತೆ ಎಲ್ಲಾ ಅಭ್ಯರ್ಥಿಗಳು ತಮ್ಮ ಮೂಲ ದಾಖಲಾತಿಗಳನ್ನು ಹಾಗೂ ಅದರ 02 ದೃಢೀಕೃತ ಪ್ರತಿಗಳೊಂದಿಗೆ ದಿನಾಂಕ: 05.01.2024 ರಂದು ಬೆಳಿಗ್ಗೆ 10:00 ಗಂಟೆಗೆ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ತಪ್ಪದೇ ಹಾಜರಿರುವಂತೆ ತಿಳಿಸಿದೆ. ಒಂದು ವೇಳೆ ಮೂಲ ದಾಖಲಾತಿಗಳನ್ನು ಹಾಜರು ಪಡಿಸದೇ ಇದ್ದಲ್ಲಿ, ನಿಯಮಾನುಸಾರದಂತೆ ಕ್ರಮವಹಿಸಲಾಗುವುದು.

ಸದಸ್ಯ ಕಾರ್ಯದರ್ಶಿಗಳು,<br>ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ<br>ಕೇಂದ್ರದ ಮೇಲ್ವಿಚಾರಕರ ಆಯ್ಕೆ ಸಮಿತಿ ಹಾಗೂ<br>ಉಪಕಾರ್ಯದರ್ಶಿಗಳು ಜಿಲ್ಲಾ ಪಂಚಾಯತ್ ರಾಯಚೂರು.

ಇವರಿಗೆ,

1. ಜಿಲ್ಲೆಯ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕು ಪಂಚಾಯತಿ ಇವರಿಗೆ ಕಳುಹಿಸುತ್ತಾ, ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
2. ಸಂಬಂಧಿಸಿದ ಗ್ರಾ.ಪಂ.ಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಇವರಿಗೆ ಕಳುಹಿಸುತ್ತಾ ಸೂಚನಾ ಫಲಕದಲ್ಲಿ ಪ್ರಕಟಿಸಲು ಹಾಗೂ ಸಂಬಂಧಿಸಿದ ಅರ್ಜಿದಾರರಿಗೆ ಈ ಅಧಿಕೃತ ಜ್ಞಾಪನವನ್ನು ತಲುಪಿಸಿ, ಸ್ವೀಕೃತ ಪ್ರತಿಯನ್ನು ಈ ಕಾರ್ಯಾಲಯಕ್ಕೆ ಕಳುಹಿಸಲು ತಿಳಿಸಿದೆ.
3. DPM, ಜಿಲ್ಲಾ ಪಂಚಾಯತ್ ರಾಯಚೂರು ಇವರಿಗೆ ನೀಡುತ್ತಾ, ಸದರಿ ಮಾಹಿತಿಯನ್ನು ಜಿಲ್ಲಾ ಪಂಚಾಯತಿಯ ವೆಬ್‌ಸೈಟ್ ನಲ್ಲಿ ಅಳವಡಿಸಲು ಸೂಚಿಸಿದೆ.
4. ಪಟ್ಟಿಯಲ್ಲಿರುವಂತೆ ಎಲ್ಲಾ ಅಭ್ಯರ್ಥಿಗಳಿಗೆ (ಸಂಬಂಧಿಸಿದ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಮುಖಾಂತರ).